C

# ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

**ವಿಷಯ:-** ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನ ತುರುವಿನಹಾಳ ಗ್ರಾಮಕ್ಕೆ ಮಂಜೂರಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ನಿವೇಶನ ಒದಗಿಸುವ ಕುರಿತು.

**ಓದಲಾಗಿದೆ:-** 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿನಿ/ಕೇಕ/ಸಿ.11/ಎಎಸ್‌ಟಿ/295/ಭೂ ಬಾಡಿಗೆ/2015-16/6340 ದಿನಾಂಕ:01.03.2016.

2. ಸರ್ಕಾರದ ಆದೇಶ ಸಂಖ್ಯೆ: ಇಡಿ 123 ಮಾಹಿತಿ 2013 ಬೆಂಗಳೂರು, ದಿನಾಂಕ:31.08.2013.

---***---

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಪತ್ರದಲ್ಲಿ ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ತುರುವಿನಹಾಳ ಗ್ರಾಮಕ್ಕೆ ಮಂಜೂರಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ರೂ.53.22 ಲಕ್ಷ ಮೊತ್ತಕ್ಕೆ ಶಿಕ್ಷಣ ಇಲಾಖೆಗೆ ನೀಡಲು ಅನುಮೋದನೆ ಕೋರಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರ ಸರ್ಕಾರದ ಆದೇಶದಲ್ಲಿ ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕು ತುರುವಿನಹಾಳ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವುದಕ್ಕೆ ತಾತ್ವಿಕ ಅನುಮತಿ ನೀಡಿ, ಸರ್ಕಾರವು ಆದೇಶ ಹೊರಡಿಸಿರುತ್ತದೆ.

ಶಿಕ್ಷಣ ಇಲಾಖೆಯ ಅಭಿಪ್ರಾಯದ ಹಿನ್ನೆಲೆಯಲ್ಲಿ, ಕರ್ನಾಟಕ ಭೂ ಮಂಜೂರಾತಿ (ತಿದ್ದುಪಡಿ) ನಿಯಮಗಳು 2015ರ ನಿಯಮ 22 ಎ 3(1) ರನ್ವಯ ಜಲಸಂಪನ್ಮೂಲ ಇಲಾಖೆಯ ಕರ್ನಾಟಕ ನೀರಾವರಿ ನಿಗಮಕ್ಕೆ ಸೇರಿದ 2.35 ಎಕರೆ ಜಮೀನನ್ನು ಸರ್ಕಾರದಿಂದ ಮಂಜೂರಾತಿಯಾದ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ಶಿಕ್ಷಣ ಇಲಾಖೆಗೆ ಉಚಿತವಾಗಿ ಹಸ್ತಾಂತರಿಸಲು ಆಡಳಿತ ಇಲಾಖೆಯು ನಿರ್ಧರಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 22 ಎಂಟಿಪಿ 2014 (ಭಾಗ-1) ಬೆಂಗಳೂರು,**
**ದಿನಾಂಕ:30.08.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ, ತುರುವಿನಹಾಳ ಗ್ರಾಮದಲ್ಲಿ ಜಲಸಂಪನ್ಮೂಲ ಇಲಾಖೆಯ ಅಧೀನದಲ್ಲಿರುವ ಸ.ನಂ.332/11 ರಲ್ಲಿನ 11.22 ಎಕರೆ ಜಮೀನಿನ ಪೈಕಿ 2.35 ಎಕರೆ ಜಮೀನನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣಕ್ಕಾಗಿ ಶಿಕ್ಷಣ ಇಲಾಖೆಗೆ ಉಚಿತವಾಗಿ ಹಸ್ತಾಂತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

...2

ಈ ಆದೇಶವನ್ನು ಕಂದಾಯ ಇಲಾಖೆಯ ಟಿಪ್ಪಣಿ ಸಂಖ್ಯೆ: ಆರ್‌ಡಿ 12 ಎಲ್‌ಜಿಆರ್ 2016 ದಿನಾಂಕ: 30-11-2018 ರಲ್ಲಿ ಉನ್ನತ ಶಿಕ್ಷಣ ಇಲಾಖೆಯ ಟಿಪ್ಪಣಿ ಸಂಖ್ಯೆ:02 ದಿನಾಂಕ:02.01.2019 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 336 ಆಕೋ-1/2018, ದಿನಾಂಕ:12.06.2019ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

3/8/19

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
6. ಮಾನ್ಯ ಮುಖ್ಯ ಮಂತ್ರಿಗಳ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ ಕೇಂದ್ರ ವಲಯ, ಮುನಿರಾಬಾದ್, ಹೊಸಪೇಟೆ, ಬಳ್ಳಾರಿ
9. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.